# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1123
ಉತ್ತರಿಸಬೇಕಾದ ದಿನಾಂಕ : 21.08.2025
ಸದಸ್ಯರ ಹೆಸರು :ಶ್ರೀ ಪ್ರತಾಪ್ ಸಿಂಹ ನಾಯಕ್. ಕೆ
(ವಿಧಾನ ಸಭೆಯಿಂದ ಚುನಾಯಿತರಾದವರು)
ಉತ್ತರಿಸುವ ಸಚಿವರು : ಮಾನ್ಯ ಮುಖ್ಯಮಂತ್ರಿಯವರು

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಪ್ರಸ್ತುತ ಒಟ್ಟು ಎಷ್ಟು ಕೀಡಾ ಹಾಸ್ಟೆಲ್‌ಗಳು ಕಾರ್ಯನಿರ್ವಹಿಸುತ್ತಿವೆ; | ದಕ್ಷಿಣ ಕನ್ನಡ ಜಿಲ್ಲೆಯ ಮಂಗಳೂರಿನಲ್ಲಿ ಪ್ರಸ್ತುತ ಒಂದು ಜಿಲ್ಲಾ ಕ್ರೀಡಾ ವಸತಿ ನಿಲಯ ಕಾರ್ಯನಿರ್ವಹಿಸುತ್ತಿದೆ. |
| ಆ) | ಈ ಎಲ್ಲಾ ಕ್ರೀಡಾ ಹಾಸ್ಟೆಲ್‌ಗಳು ಸ್ವಂತ ಕಟ್ಟಡ ಹೊಂದಿವೆಯೇ; ಹಾಗೂ ಅವುಗಳಲ್ಲಿ ಎಲ್ಲಾ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಲಾಗಿದೆಯೇ; | ದಕ್ಷಿಣ ಕನ್ನಡ ಜಿಲ್ಲೆಯ ಮಂಗಳೂರಿನಲ್ಲಿ ಕಾರ್ಯನಿರ್ಹಿಸುತ್ತಿರುವ ಜಿಲ್ಲಾ ಕ್ರೀಡಾ ವಸತಿ ನಿಲಯವು ಬಾಲಕ-ಬಾಲಕಿಯರಿಗೆ ಪ್ರತ್ಯೇಕ ವಸತಿ ವ್ಯವಸ್ಥೆ ಇರುವ ಸ್ವಂತ ಕಟ್ಟಡಗಳನ್ನು ಹೊಂದಿದೆ.<br>ಸದರಿ ವಸತಿ ನಿಲಯದಲ್ಲಿ ವಸತಿ ಕೊಠಡಿಗಳು, ಭೋಜನಾಲಯ, ಶೌಚಾಲಯ, ಸ್ನಾನಗೃಹ ವಿದ್ಯುತ್, ನೀರು ಮತ್ತಿತರ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಲಾಗಿದೆ.<br>ಅಲ್ಲದೇ, ಕ್ರೀಡಾ ವಸತಿ ನಿಲಯದಲ್ಲಿ ಮಂಚ, ಹಾಸಿಗೆ, ಹೊದಿಕೆಗಳು, ಶುದ್ಧ ಕುಡಿಯುವ ನೀರು, ಸೋಲಾರ್ ವಾಟರ್ ಹೀಟರ್, ವಾಷಿಂಗ್ ಮಷಿನ್, ಡೈನಿಂಗ್ ಟೇಬಲ್, ಸಿ.ಸಿ.ಟಿ.ವಿ. ಕಣ್ಗಾವಲು ವ್ಯವಸ್ಥೆ ಕಲ್ಪಿಸಲಾಗಿದೆ. |
| ಇ) | ಸದರಿ ಕ್ರೀಡಾ ಹಾಸ್ಟೆಲ್‌ಗಳಲ್ಲಿ ಪ್ರಸ್ತುತ ಇರುವ ದಾಖಲಾತಿ ಸಾಮರ್ಥ್ಯವೆಷ್ಟು; ಹಾಗೂ ದಾಖಲಾಗಿರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು; (ಪ್ರತಿ ಹಾಸ್ಟೆಲ್ ನ ವಿವರ ಪ್ರತ್ಯೇಕವಾಗಿ ನೀಡುವುದು;) | ದಕ್ಷಿಣ ಕನ್ನಡ ಜಿಲ್ಲೆಯ ಮಂಗಳೂರು ಕ್ರೀಡಾ ವಸತಿ ನಿಲಯಕ್ಕೆ ಕ್ರೀಡಾಪಟುಗಳ ದಾಖಲಾತಿ ಸಾಮರ್ಥ್ಯ 50 ಇದ್ದು, ಪ್ರಸ್ತುತ 33 ಕ್ರೀಡಾಪಟುಗಳು ಪ್ರವೇಶ ಪಡೆದು ಕ್ರೀಡಾ ತರಬೇತಿಯನ್ನು ಪಡೆಯುತ್ತಿದ್ದಾರೆ. |
| ಈ) | ಸದರಿ ಕ್ರೀಡಾ ಹಾಸ್ಟೆಲ್‌ಗಳಲ್ಲಿ ದಾಖಲಾಗಿರುವ ವಿದ್ಯಾರ್ಥಿಗಳಿಗೆ ದೊರೆಯುತ್ತಿರುವ ಸೌಲಭ್ಯಗಳು ಯಾವುವು? | ದಕ್ಷಿಣ ಕನ್ನಡ ಜಿಲ್ಲೆಯ ಮಂಗಳೂರು ಕ್ರೀಡಾ ವಸತಿ ನಿಲಯದಲ್ಲಿ ದಾಖಲಾಗಿರುವ ಕ್ರೀಡಾಪಟುಗಳಿಗೆ ಉಚಿತ ವಸತಿ, ಪೌಷ್ಠಿಕ ಊಟೋಪಹಾರ, ಕ್ರೀಡಾ ಸಮವಸ್ತ್ರ, ವೈಜ್ಞಾನಿಕ ಕ್ರೀಡಾ ತರಬೇತಿ, ಕ್ರೀಡಾಕೂಟಗಳಲ್ಲಿ ಭಾಗವಹಿಸಲು ಪ್ರಯಾಣ ಭತ್ಯೆ/ದಿನ ಭತ್ಯೆ ಸೌಲಭ್ಯ ಹಾಗೂ ಕ್ರೀಡಾ ತರಬೇತಿಗೆ ಅಗತ್ಯವಾದ ಕ್ರೀಡಾ ಸಾಮಾಗ್ರಿಗಳನ್ನು ಒದಗಿಸಲಾಗುತ್ತಿದೆ. |

ವೈಎಸ್ ಡಿ-ಇಬಿಬಿ/117/2025

(ಸಿದ್ದರಾಮಯ್ಯ)
ಮುಖ್ಯಮಂತ್ರಿ